ಮೊಕದ್ದಮೆ ದಾಖಲಿಸಿರುವುದನ್ನು ರದ್ದುಗೊಳಿಸಲಾಗಿದೆ. ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959ರ ಪ್ರಕರಣ 29ಸಿ ರಡಿ ಶ್ರೀ ಕೃಷ್ಣಭಟ್‌ರನ್ನು ಅಧ್ಯಕ್ಷ ಸ್ಥಾನದಿಂದ ಅನರ್ಹಗೊಳಿಸಲಾಗಿರುತ್ತದೆ.

ಇ) ಉದ್ಭವಿಸುವುದಿಲ್ಲ.

ಲೋಕೋಪಯೋಗಿ ಇಲಾಖೆಯ ರಸ್ತೆಗಳ ಅಭಿವೃದ್ಧಿ

240 (288) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಎಲ್ಲಾ ಲೋಕೋಪಯೋಗಿ ಇಲಾಖೆಯ ರಸ್ತೆಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಹಾಗಿದ್ದಲ್ಲಿ; ಹದಗೆಟ್ಟಿರುವ ರಸ್ತೆಗಳ ಅಭಿವೃದ್ಧಿಗೆ ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು ; ಎಷ್ಟು ಕಾಲಮಿತಿಯೊಳಗೆ ಈ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು ?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು):

ಅ) ಮಾಗಡಿ ವಿಧಾನಸಭೆ ಕ್ಷೇತ್ರ ವ್ಯಾಪ್ತಿಯಲ್ಲಿನ ಕೆಲವು ರಸ್ತೆಗಳ ಕೆಲವು ಭಾಗಗಳು ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) 2010-11ನೇ ಸಾಲಿನ ಆಯವ್ಯಯದಲ್ಲಿ 5054 ಲೆಕ್ಕಶೀರ್ಷಿಕೆ ಅಡಿಯಲ್ಲಿ ಅನುಮೋದನೆಯಾಗಿರುವ 79 ಕಾಮಗಾರಿಗಳು, ನಬಾರ್ಡ್-15ರ ಯೋಜನೆಯಡಿ 2 ಕಾಮಗಾರಿಗಳು, 2010-11ನೇ ಸಾಲಿನಲ್ಲಿ ಸುವರ್ಣ ವಿಕಾಸ ಯೋಜನೆಯಡಿ-1 ಕಾಮಗಾರಿ ಮತ್ತು ಡಾ: ಡಿ.ಎಂ. ನಂಜುಂಡಪ್ಪ ವರದಿ ಯೋಜನೆಯಡಿ-4 ಕಾಮಗಾರಿಗಳು ಒಳಗೊಂಡಂತೆ ಒಟ್ಟಾರೆ

86 ಸಂಖ್ಯೆ ಕಾಮಗಾರಿಗಳನ್ನು ರೂ. 3159.37 ಅಂದಾಜು ಮೊತ್ತದಲ್ಲಿ 34.58 ಕಿ.ಮೀ. ಉದ್ದದ ರಸ್ತೆಯನ್ನು ಅಭಿವೃದ್ಧಿಗೊಳಿಸಲು ಯೋಜಿಸಲಾಗಿದ್ದು, ಈ ಕಾಮಗಾರಿಗಳನ್ನು ಮಾರ್ಚ್ 2011ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು.

ಅಲ್ಲದೆ 5054 ವಾಹನ ದಟ್ಟಣೆ ಕಡಿಮೆಗೊಳಿಸುವ ಯೋಜನೆಯಡಿ ಮಾಗಡಿ ವಿಧಾನಸಭಾ ಕ್ಷೇತ್ರದಲ್ಲಿ ರೂ. 19615.00 ಲಕ್ಷಗಳ ಮೊತ್ತದಲ್ಲಿ 264.60 ಕಿ.ಮೀ. (34 ಕಿ.ಮೀ. ರಾಜ್ಯ ಹೆದ್ದಾರಿ, 230.60 ಜಿಲ್ಲಾ ಮುಖ್ಯ ರಸ್ತೆ) ಉದ್ದವನ್ನು ಅಭಿವೃದ್ಧಿಗೊಳಿಸಲು 2006–07 ರಿಂದ ಕ್ರಮ ಕೈಗೊಂಡಿದ್ದು, ಆರು ಪ್ಯಾಕೇಜ್‌ಗಳಿಂದ 227.00 ಕಿ.ಮೀ. ಉದ್ದದ ರಸ್ತೆಯನ್ನು ರೂ. 17886.79 ಲಕ್ಷಗಳ ವೆಚ್ಚದಲ್ಲಿ ಈಗಾಗಲೇ ಪೂರ್ಣಗೊಳಿಸಲಾಗಿದೆ.

ಕೂಟಗಲ್ ಪ್ಯಾಕೇಜ್‌ನ ಬಾಕಿ ಉಳಿದ 18.2 ಕಿಮೀ ಉದ್ದದ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿದ್ದು ಜೂನ್ 2011ರೊಳಗೆ ಪೂರ್ಣಗೊಳಿಸಲಾಗುವುದು.

ಮಾಗಡಿ ಕ್ಷೇತ್ರದ ರಸ್ತೆಗಳ ಅಭಿವೃದ್ಧಿ

241 (289) ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಿಡದಿ ಹೋಬಳಿ, ಬೈರಮಂಗಲ ರಸ್ತೆಯಲ್ಲಿ ಹಳ್ಳ ಗುಂಡಿಗಳು ಬಿದ್ದು, ಜನ, ಜಾನುವಾರು ಮತ್ತು ವಾಹನಗಳು ಓಡಾಡದಷ್ಟು ರಸ್ತೆ ಹದಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;